**All India Radio: Bangalore**
**Regional Bulletin In Kannada**
**19.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.06.2026 / 2.30 p.m.**

**<><><><>**

ಮುಖ್ಯಾಂಶಗಳು

1. ೧೨ನೇ ಅಂತಾರಾಷ್ಟ್ರೀಯ ಯೋಗ ದಿನ : ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ೨,೫೦೦ಕ್ಕೂ ಅಧಿಕ ಸ್ಥಳಗಳಲ್ಲಿ ಏಕಕಾಲಕ್ಕೆ ಯೋಗಾಭ್ಯಾಸ
2. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂತಾರಾಷ್ಟ್ರೀಯ ಯೋಗದಿನ ಅಂಗವಾಗಿ ನಡಿಗೆ, ಜಾಗೃತಿ ಜಾಥಾ ಕಾರ್ಯಕ್ರಮಗಳಿಗೆ ಚಾಲನೆ
3. ಜೂನ್ ೩೦ ರಿಂದ ಜುಲೈ ೨೯ರ ವರೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ
4. ಕುಡಿಯುವ ನೀರಿನ ಯೋಜನೆ ಕಾಮಗಾರಿ ವಿಳಂಬವಾದರೆ ಕ್ರಮ : ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸೂಚನೆ

<><><><>

ಯೋಗ ಭಾರತೀಯ ಸಂಸ್ಕೃತಿಯ ಅಮೂಲ್ಯ ಕೊಡುಗೆಗಳಲ್ಲಿ ಒಂದು. ಇದು ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವನ್ನು ಸಾಧಿಸುವ ಪ್ರಾಚೀನ ಶಿಸ್ತಾಗಿದ್ದು, ವಿಶ್ವದಾದ್ಯಂತ ಅದರ ಮಹತ್ವವನ್ನು ಇತ್ತೀಚಿನ ದಿನಗಳಲ್ಲಿ ಎಲ್ಲರೂ ಅರಿಯತೊಡಗಿದ್ದಾರೆ. ೧೨ನೇ ಅಂತರಾಷ್ಟ್ರೀಯ ಯೋಗ ದಿನವನ್ನು ಎಂದಿನಂತೆ ಜೂನ್ ೨೧ರಂದು ಆಚರಿಸಲಾಗುತ್ತಿದ್ದು, ಈ ವರ್ಷದ ಮುಖ್ಯ ಕಾರ್ಯಕ್ರಮವು ಪಶ್ಚಿಮ ಬಂಗಾಳದ ಕೋಲ್ಕತಾದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಜರುಗಲಿದೆ. ಈ ವರ್ಷದ ಅಂತರಾಷ್ಟ್ರೀಯ ಯೋಗ ದಿನವನ್ನು "ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ" ಎಂಬ ವಿಷಯದಡಿ ಆಚರಿಸಲಾಗುತ್ತಿದೆ. ಇದು ವಯಸ್ಸಾದಂತೆ ದೈಹಿಕ ಕ್ಷಮತೆ, ಸ್ವಾತಂತ್ರ್ಯ ಮತ್ತು ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳಲು ಯೋಗದ ಮಹತ್ವವನ್ನು ಒತ್ತಿಹೇಳುತ್ತದೆ. ಭಾರತದಾದ್ಯಂತ ಸುಮಾರು ೨,೫೦೦ಕ್ಕೂ ಅಧಿಕ ಸ್ಥಳಗಳಲ್ಲಿ ಏಕಕಾಲಕ್ಕೆ ಯೋಗಾಭ್ಯಾಸ ನಡೆಯಲಿದ್ದು, ಕರ್ನಾಟಕದ ಐತಿಹಾಸಿಕ ತಾಣವಾದ ಹಂಪಿಯ ಆವರಣದಲ್ಲೂ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸರಕಾರದ ವತಿಯಿಂದ, ಬೆಂಗಳೂರಿನ

ವಿಧಾನ ಸೌಧದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಬಾರಿಯ ೧೨ನೇ ಅಂತಾರಾಷ್ಟ್ರೀಯ ಯೋಗಾ ದಿನಾಚರಣೆ ಅಂಗವಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಯೋಗ ನಡಿಗೆ, ಜಾಗೃತಿ ಜಾಥಾ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ. ಚಿಕ್ಕಮಗಳೂರು ನಗರದಲ್ಲಿಂದು ಯೋಗಾ ನಡಿಗೆ ಜಾಥ ನಡೆಯಿತು. ನಗರದ ತಾಲೂಕು ಕಚೇರಿಯ ಆವರಣದಿಂದ ಎಂ.ಜಿ. ರಸ್ತೆ ಮೂಲಕ ಅಜಾದ್ ಪಾರ್ಕ್‌ವರೆಗೆ ನಡೆದ ಜಾಥಾಗೆ ಶಾಸಕ ಹೆಚ್.ಡಿ ತಮ್ಮಯ್ಯ ಹಾಗು ಜಿಲ್ಲಾಧಿಕಾರಿ ಭನ್ವರ್ ಸಿಂಗ್ ಮೀನಾ ಚಾಲನೆ ನೀಡಿದರು. ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಹಾಸನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸೇರಿದಂತೆ ವಿವಿಧ ಇಲಾಖೆ ಹಾಗೂ ಸಂಘ ಸಂಸ್ಥೆಗಳ ವತಿಯಿಂದ ಆಯೋಜಿಸಿದ್ದ ಬೃಹತ್ ಜಾಗೃತಿ ಜಾಥಾಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶುಭಂ ಶುಕ್ಲಾ ಚಾಲನೆ ನೀಡಿದರು. ಜಾಥಾ ಉದ್ದಕ್ಕೂ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಘೋಷಣೆಯೊಂದಿಗೆ ಯೋಗದ ಪ್ರಾಮುಖ್ಯತೆ ಬಗ್ಗೆ ಜಾಗೃತಿ ಮೂಡಿಸಿದರು. ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಮತ್ತು ಪತಂಜಲಿ ಯೋಗ ಸಮಿತಿ ಸೇರಿದಂತೆ ವಿವಿಧ ಇಲಾಖೆ ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಇಂದು ಬೆಳಿಗ್ಗೆ ೧೨ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿಯಾಗಿ ಬೈಕ್ ಜಾಥಾಗೆ ಅಪರ ಜಿಲ್ಲಾಧಿಕಾರಿಗಳಾದ ಇ. ಬಾಲಕೃಷ್ಣ ಚಾಲನೆ ನೀಡಿದರು ಯೋಗ ಮತ್ತು ಯೋಗ ದಿನಾಚರಣೆಯ ಮಹತ್ವವನ್ನು ತಿಳಿಸುವ ಘೋಷಣೆ ಕೂಗುತ್ತ ಭಿತ್ತಿ ಪತ್ರಗಳನ್ನು ಸಾರ್ವಜನಿಕರಿಗೆ ನೀಡಿ ಜಾಗೃತಿ ಮೂಡಿಸಲಾಯಿತು. ಹೊಸಪೇಟೆ ನಗರದ ಫ್ರೀಡಂ ಪಾರ್ಕ್‌ನಿಂದ ಆರಂಭವಾದ ಜಾಥಾ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಪುನಃ ಫ್ರೀಡಂ ಪಾರ್ಕ್ ಸೇರಿತು. ಜಾಥಾದಲ್ಲಿ ಸುಮಾರು ೨೦೦ಕ್ಕೂ ಅಧಿಕ ಸಂಖ್ಯೆಯಲ್ಲಿ ವಾಹನ ಸವಾರರು ಭಾಗವಹಿಸಿದ್ದರು.

<><><><>

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಜಿಲ್ಲೆಯಲ್ಲಿ ಜೂನ್ ೩೦ ರಿಂದ ಜುಲೈ ೨೯ ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯೂಮರೇಷನ್ (ಎಣಿಕೆಯ) ನಮೂನೆಗಳನ್ನು ನೀಡುವ ಮತ್ತು ಅವುಗಳನ್ನು ಸಂಗ್ರಹಿಸುವ ಕಾರ್ಯದ ಯಶಸ್ಸಿಗೆ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳು ಅಗತ್ಯ ಸಹಕಾರವನ್ನು ನೀಡುವಂತೆ

ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಹೇಳಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಮಾತನಾಡಿದ ಅವರು, ಮತಗಟ್ಟೆ ಅಧಿಕಾರಿಗಳು ಎಣಿಕೆ ಅರ್ಜಿ ನಮೂನೆ ನೀಡಲು ಒಂದು ಬಾರಿ ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸಂಗ್ರಹಿಸಲು ಮೂರು ಬಾರಿ ಮತದಾರರ ಮನೆಗೆ ಭೇಟಿ ನೀಡಲಿದ್ದು, ಅಧಿಕಾರಿಗಳು ತಮ್ಮ ಮನೆಗೆ ಬಂದಾಗ ಅರ್ಜಿಗಳನ್ನು ಭರ್ತಿ ಮಾಡಿ ಅವರಿಗೆ ಮರಳಿ ನೀಡುವುದು ಅತ್ಯಂತ ಕಡ್ಡಾಯವಾಗಿದೆ. ಅರ್ಜಿ ಮರಳಿ ನೀಡದಿದ್ದರೆ, ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುವುದಿಲ್ಲ ಎಂದರು. ಗದಗ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ಮತ್ತು ಪಾರದರ್ಶಕವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾರರ ಜಾಗೃತಿಯನ್ನು ಮತ್ತಷ್ಟು ಹೆಚ್ಚಿಸಲು ಸರ್ಕಾರಿ ಇಲಾಖೆಗಳು ಹಾಗೂ ಖಾಸಗಿ ವಲಯಗಳಲ್ಲಿ ಮತದಾರರ ಜಾಗೃತಿ ವೇದಿಕೆ' ಸ್ಥಾಪಿಸಲು ನಿರ್ಧರಿಸಲಾಗಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆಯ ಸಿಬ್ಬಂದಿ ಒಳಗೊಂಡಂತೆ ಸ್ವತಂತ್ರ ವೇದಿಕೆ ರಚಿಸಿ, ಸ್ವೀಪ್ ಹಾಗೂ ಎಸ್‌ಐಆರ್ ಸಂಬಂಧಿತ ಆಡಿಯೋ, ವಿಡಿಯೋ ಮತ್ತು ಜಾಗೃತಿ ಸಾಮಗ್ರಿಗಳನ್ನು ಪ್ರಸಾರ ಮಾಡಲು ಕ್ರಮ ಕೈಗೊಳ್ಳಬೇಕು. ಇದರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸದಂತೆ ಸೂಚಿಸಿದ್ದಾರೆ.

<><><><>

ನಗರ ಪ್ರದೇಶಗಳ ಕುಡಿಯುವ ನೀರಿನ ಕಾಮಗಾರಿಗಳು ನಿಗದಿತ ಸಮಯಕ್ಕೆ ಪೂರ್ಣಗೊಳಿಸಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿದ್ದಾರೆ. ಬೆಂಗಳೂರಿನಲ್ಲಿ ಸಬೆ ನಡೆಸಿದ ಅವರಿಂದು ಬೆಳಗಾವಿ, ಕಲಬುರಗಿ ಹಾಗೂ ಹುಬ್ಬಳ್ಳಿ-ಧಾರವಾಡದಲ್ಲಿ ಕೆಯುಐಡಿಎಫ್‌ಸಿ ಮೂಲಕ ವಿಶ್ವಬ್ಯಾಂಕ್ ಪ್ರಾಯೋಜಿತ ಕುಡಿಯುವ ನೀರಿನ ಬೃಹತ್ ಕಾಮಗಾರಿಗಳನ್ನ ಎಲ್ ಅಂಡ್ ಟಿ ಅನುಷ್ಠಾನಗೊಳಿಸುತ್ತಿದ್ದು, ಕಾಮಗಾರಿಗಳು ನಿಧಾನವಾಗಿರುವ ಹಿನ್ನೆಲೆಯಲ್ಲಿ ಎಲ್ ಅಂಡ್ ಟಿ ಅಧಿಕಾರಿಗಳಿಗೆ ನಿಗದಿತ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು. ಎಲ್ ಅಂಡ್ ಟಿ ಯೋಜನಾ ಮುಖ್ಯಸ್ಥರಾದ ವೆಂಕಟೇಶನ್ ಹಾಗೂ ಇತರೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

<><><><>

ಉತ್ತರ ಕನ್ನಡ ಜಿಲ್ಲೆಯ ಕುಮಟಾದ ಕೊಂಕಣ ರೈಲ್ವೆ ನಿಲ್ದಾಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಲೋಕಾರ್ಪಣೆ ಹಾಗೂ ರೈಲು ವಿಸ್ತರಣಾ ಸೇವೆಗೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ನಾಳೆ ಚಾಲನೆ ನೀಡಲಿದ್ದಾರೆ. ಜಿಲ್ಲೆಯ ಸಾರ್ವಜನಿಕರು, ಪ್ರವಾಸಿಗರು ಹಾಗೂ ಪ್ರಮುಖವಾಗಿ ತಿರುಪತಿಗೆ ಪ್ರಯಾಣಿಸುವ ಭಕ್ತಾದಿಗಳಿಗೆ ಅತ್ಯಂತ ಅನುಕೂಲಕರವಾಗುವಂತೆ, ಈ ಹಿಂದೆ ಕಾಚಿಗುಡ-ಮುರುಡೇಶ್ವರ ನಡುವೆ ಸಂಚರಿಸುತ್ತಿದ್ದ ರೈಲು ಸಂಖ್ಯೆ ೧೨೭೯೦ ಮತ್ತು ೧೨೭೮೯ನ್ನು ಇದೀಗ ಮುರುಡೇಶ್ವರದಿಂದ ಕುಮಟಾದವರೆಗೆ ಅಧಿಕೃತವಾಗಿ ವಿಸ್ತರಿಸಲಾಗುತ್ತಿದೆ. ಈ ವಿಸ್ತರಿತ ರೈಲು ಸೇವೆಗೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಲಿದ್ದಾರೆ. ಅದೇ ರೀತಿ ಕುಮಟಾ ಮಾತ್ರವಲ್ಲದೇ ಮುರುಡೇಶ್ವರ, ಗೋಕರ್ಣ ಮತ್ತು ಭಟ್ಕಳ ರೈಲ್ವೆ ನಿಲ್ದಾಣಗಳಲ್ಲಿಯೂ ಸಹ ವಿವಿಧ ಅಭಿವೃದ್ಧಿ ಕಾಮಗಾರಿಗಳು ಹಾಗೂ ಪ್ರಯಾಣಿಕರ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸಲಾಗಿದ್ದು, ಈ ಎಲ್ಲ ಕಾಮಗಾರಿಗಳನ್ನು ನಾಳೆ ಕುಮಟಾ ನಿಲ್ದಾಣದಿಂದಲೇ ಜಂಟಿಯಾಗಿ ಲೋಕಾರ್ಪಣೆಗೊಳಿಸಲಾಗುವುದು ಎಂದು ಸಂಸದ ಕಾಗೇರಿ ಕಾರ್ಯಾಲಯದ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಹಾವೇರಿ ಜಿಲ್ಲೆಯಲ್ಲಿ ಗ್ರಾಮೀಣ ಭಾಗದ ಮಹಿಳೆಯರು ವಿವಿಧ ಖಾಸಗಿ ಸಂಸ್ಥೆಗಳಲ್ಲಿ ಹಣ ಹೂಡಿಕೆ ಮಾಡಿ ಮೋಸ ಹೋಗುತ್ತಿರುವ ಪ್ರಕರಣಗಳು ವರದಿಯಾಗುತ್ತಿದ್ದು, ನೂರಾರು ಕೋಟಿ ರೂಪಾಯಿ ಮೊತ್ತದ ಹಗರಣ ನಡೆಯುತ್ತಿರುವ ಮಾಹಿತಿಯಿದೆ. ಜಿಲ್ಲೆಯಲ್ಲಿ ಇಂತಹ ಖಾಸಗಿ ಸಂಸ್ಥೆಗಳ ಮೇಲೆ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ  ಮಾತನಾಡಿದ ಅವರು, ಜಿಲ್ಲೆಯಲ್ಲಿ ಅನಧಿಕೃತವಾಗಿ ನಡೆಯುವ ಖಾಸಗಿ ಹಣಕಾಸು ಸಂಸ್ಥೆಗಳ ಮೇಲೆ ತಹಶೀಲ್ದಾರ್‌ಗಳು ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ನಿಗಾ ವಹಿಸಬೇಕು. ಕಾಲ ಕಾಲಕ್ಕೆ ಪರಿಶೀಲಿಸಬೇಕು. ಸಂಸ್ಥೆಯು ಕಾನೂನುಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆಯೋ? ಇಲ್ಲವೋ? ಎಂಬುದನ್ನು ತಿಳಿಯಬೇಕು' ಎಂದರು. ಎಸ್.ಸಿ.ಎಸ್.ಪಿ. ಮತ್ತು ಟಿಎಸ್‌ಪಿ ಯೋಜನೆಯಡಿ ಜಿಲ್ಲೆಯ ವಿವಿಧ ಇಲಾಖೆಗಳಿಗೆ ೨೩

ಲಕ್ಷ ೮೧ ಸಾವಿರ ರೂಪಾಯಿ ಅನುದಾನ ಬಿಡುಗಡೆಯಾಗಿದೆ. ಬಿಡುಗಡೆಯಾದ ಅನುದಾನದಲ್ಲಿ ಈಗಾಗಲೇ ೧೧ ಲಕ್ಷ ೧೨ ಸಾವಿರ ರೂಪಾಯಿ ವೆಚ್ಚ ಮಾಡಲಾಗಿದ್ದು, ಶೇ ೪೨.೮೯ರಷ್ಟು ಸಾಧನೆ ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

<><><>

ಮಣ್ಣಿನ ಆರೋಗ್ಯ ಕಾಪಾಡುವುದು, ರಾಸಾಯನಿಕ ರಸಗೊಬ್ಬರಗಳ ಅತಿಯಾದ ಬಳಕೆ ತಡೆಯುವುದು ಮತ್ತು ಸುಸ್ಥಿರ ಕೃಷಿ ಉತ್ತೇಜಿಸುವ ಸಲುವಾಗಿ ಕೇಂದ್ರ ಸರ್ಕಾರ 'ಖೇತ್ ಬಚಾವೋ' ಆಂದೋಲನವನ್ನು ಪ್ರಾರಂಭಿಸಿದೆ ಎಂದು  ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಮಲ್ಲಿಕಾರ್ಜುನ್ ತಿಳಿಸಿದರು. ಚನ್ನಗಿರಿ ತಾಲೂಕಿನ ಹೊದಿಗೆರೆ ಗ್ರಾಮದಲ್ಲಿ ಕೃಷಿ ಇಲಾಖೆಯಿಂದ ನಡೆದ 'ಖೇತ್ ಬಚಾವೋ' ಹಾಗೂ ತೊಗರಿ ಕಿರು ಚೀಲ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಹಲವು ಕಾರ್ಯಕ್ರಮಗಳ ಕುರಿತು ತಿಳುವಳಿಕೆ ಪಡೆಯಲು ರೈತರು ಕೃಷಿ ಇಲಾಖೆಯೊಂದಿಗೆ ನಿರಂತರ ಸಂಪರ್ಕದಲ್ಲಿ ಇರಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಚ್.ಎಸ್. ಅರುಣ್ ಕುಮಾರ್ ರೈತರಿಗೆ ತೊಗರಿ ಬೆಳೆಯ ಕಿರು ಚೀಲಗಳನ್ನು ವಿತರಿಸಿದರು.

<><><>

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಬೆಳೆ ನಷ್ಟದಿಂದ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಜಾರಿಯಲ್ಲಿರುವ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಅರ್ಹ ರೈತರ ನೋಂದಣಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>